# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 322

2) ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವ

3) ಉತ್ತರಿಸಬೇಕಾದ ದಿನಾಂಕ : 15-02-2023

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ದಕ್ಕೆಯಲ್ಲಿ ಅಳಿವೆ ಬಾಗಿಲಿನ ಹೂಳೆತ್ತುವ ಯೋಜನೆ ಸರ್ಕಾರದ ಮುಂದಿದೆಯೇ; ಅನೇಕ ವರ್ಷಗಳಿಂದ ಹೂಳೆತ್ತುವ ಯೋಜನೆಯನ್ನು ಹಮ್ಮಿಕೊಳ್ಳದಿರಲು ಕಾರಣವೇನು; | ಕೇಂದ್ರ ಪುರಸ್ಕೃತ ಯೋಜನೆಯಡಿ ಹೂಳೆತ್ತುವ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿತ್ತು. ಕಳೆದ 6 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನ ಬಿಡುಡೆಯಾಗದ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಮಂಗಳೂರು ಧಕ್ಕೆಯ ಅಳಿವೆ ಬಾಗಿಲಿನ ಹೂಳೆತ್ತುವ ಕಾಮಗಾರಿಗೆ ರಾಜ್ಯ ಸರ್ಕಾದಿಂದ ರೂ.390.00 ಲಕ್ಷಗಳ ಅನುದಾನ ನೀಡಲಾಗಿದೆ. ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಮುಗಿದಿದ್ದು ಟೆಂಡರ್‌ದಾರರಿಗೆ ಕಾರ್ಯಾದೇಶ ನೀಡಲಾಗಿದೆ. |
| ಆ) | ಅಳಿವೆ ಬಾಗಲಿನ ಹೂಳೆತ್ತುವುದರಿಂದ ಮೀನುಗಾರಿಕೆ ಬೋಟುಗಳಿಗೆ ಹಾನಿ ಯಾಗಿರುವುದು ಹಾಗೂ ಮೀನುಗಾರರ ಜೀವಕ್ಕೆ ಧಕ್ಕೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಳಿವೆ ಬಾಗಲಿನಲ್ಲಿ ಹೂಳೆತ್ತದೆ ಇರುವುದರಿಂದ ಮೀನುಗಾರಿಕೆ ದೋಣಿಗಳಿಗೆ ಹಾನಿ ಮತ್ತು ಮೀನುಗಾರರ ಜೀವಕ್ಕೆ ಧಕ್ಕೆ ಆಗಿರುವ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಇ) | ಮಂಗಳೂರು ದಕ್ಕೆಯು 2ನೇ ಹಂತದಲ್ಲಿದ್ದು, ಮೂರನೇ ಹಂತದ ಕಾಮಗಾರಿ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ? | ಮಂಗಳೂರು ಮೀನುಗಾರಿಕೆ ಬಂದರಿನ 3ನೇ ಹಂತದ ವಿಸ್ತರಣೆಯ ಉಳಿಕೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಪಸಂಮೀ ಇ-31 ಮೀಇಯೋ 2023

(ಎಸ್ ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು